5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ್ ದರಖಾಸ್ತು ಮಾಡುತ್ತಾರೆಯೋ ಎಂಬವನ್ನು ನಮೋದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ತಸ್ಥರಿಂದ ರುಜು ಮಾಡಲ್ಪಟ್ಟ ದರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂತವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6 ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ ಬಡ್ಡೀ ವ ಇತರ ಖರ್ಚುಗಳು ದೇವೀಲ್ ಕಂದಾಯದ ಬಾಕೀ ಮೊಬಲಗನ್ನು ಪೂರಾ ಹಾಜರ್ ಮಾಡಿದರೆ, ಹರಾಜು ಮೆವುಕೂಫ್ ಮಾಡಲ್ಪಡತಕ್ಕದ್ದು; ಪರಂತು ಹರಾಜಿಗೆ ಗೊತ್ತಾದ ದಿನಕ್ಕೆ ಹಿಂದಿನ ದಿನದ ಸೂರ್ಯಾಸ್ತಮಯಕ್ಕೆ ಮುಂಚಿತವಾಗಿ ಸದರೀ ಹಣ ಹಾಜರ್ಮಾಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಕಾಯಮಮಾದ್ದಾಗಿರುವದಿಲ್ಲ.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತೀ ಮಾಡಿ, ಹರಾಜನ್ನು ದಿವಾನರವರು ಕಾಯಂ ಮಾಡಿದ ಕೂಡ್ಲೆ ಗ್ರಾಮಪ್ರ ಆತನ ಸುಖದ್ದೂ ಮಾಡಲ್ಪಟ್ಟು, ಕ್ರಯಪತ್ರವನ ಪಸರನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಹೆಫ್ಯೂಟ ಕಮ್ಮಿಷನರವರಿಂದ ರುಜು ಮೊಹರ್ ಮಾಡೋಸಾದ ಒಂದು ಸರ್ಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಸೀಲ್‌ನಲ್ಲಾಗಲಿ ಅಂದಾಜಾ ವಿಚಾರೀ ವಿಷಯದಲ್ಲಾಗಲಿ ಇರುವ ಗಲ್ಲತಿಗಳಿಗೆ ಸರ್ಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ಲಿಖಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನಿರ್ಣಾ ಪಟ್ಟಂತೆ ಎಣಿಸುವ ದಿನಗಳು, ಹರಾಜ್ ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ದಾಖಿಲ್‌ಕೊಳ್ಳಲಿಕ್ಕೆ ಸ್ವತಂತ್ರರುತ್ತಾರೆ. ಅಂತಾ ಅಪ್ಪೀಲಿನಲ್ಲಿ ಆಗುವ ಆರ್ಡರ್ ಹುಕುಮಿಗೆ ಸದರೀ ಕ್ರಯವು ಬಳಪಟ್ಟಿರುತ್ತೆ.

ತಿಪ್ಪಗೊಂಡನಹಳ್ಳಿ.	ತಾಲ್ಲೂಕು.	ಹೋಬಳಿ.	ಗ್ರಾಮ.	ಜಿರಾಯಿದಾರರ ಹೆಸರು.	ಅಂದಾಜಾ ಬೀಜವರೀ.	ಅಂದಾಜಾ ಹುಟ್ಟುವಳಿ ಯಾ ವರ್ತು.	ಸಾಲೀಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.	ಯಾವ ಜಾತೀಗೋಸ್ಕರ ಗ್ರಾಮವು ಹರಾಜಿ ಮಾಡಲ್ಪಡುತ್ತೊ ಅಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
ಪೆಂಗಳೂರು.	ಆನೇಕಲ್.	ಸರ್ಜಾಪುರ.			ಖಂ. ಕೂ. ಪ.	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ.	
			ಕೊತ್ತಗಾನಹಳ್ಳಿ	ನಂಜುಂಡಭಟ್ಟ, ಇತರ ಇಬ್ಬರು	20 0 0	110 4 1	110 0 0	181 14 3	1885ನೇ ಇಸವಿ ಅಕ್ಟೋಬರ್ ತಾರೀಖು 12ರಲ್ಲಿ ಆನೇಕಲ್ ತಾಲ್ಲೂಕು ಕಚ್ಚೇರಿಯಲ್ಲಿ ಅಮಲ್ದಾರ್ರ ರೂಬರೂ

ಬಿ. ಎಸ್. ಪುಟ್ಟಣ್ಣಯ್ಯ,
ಅ|| ಅಂಡರ್ ಸೆಕ್ರೆಟೇರಿ.

ಪಬ್ಲಿಕ್ ವರ್ಕ್ಸ್ ಇಲಾಖೆ.

ನಂ. 4346—944. ತಾರೀಖು 1ನೇ ಸೆಪ್ಟೆಂಬರ್ 1885.

ಸೆಂಟ್ರಲ್ ಆಫೀಸಿಗೆ ನೇರವೆ ಅಸಿಸ್ಟೆಂಟ್ ಇಂಜನಿಯರ್ ಮೆ|| ಎಂ. ಬಿ. ಶಿವಾರಿಯವರು ಸರ್ವೆ ಕೆಲಸದ ಬಗ್ಗೆ ಕೋಲಾರ ಡಿವಿಜನ್ನಿಗೆ ಪಂಗಾಮಿ ತರೀಕ ವರ್ಗ ಮಾಡಲ್ಪಟ್ಟಿರುತ್ತಾರೆ.

ಹುಕ್ಕುಂ ಬಿನೋಜೇವ್,
ಎಫ್. ಜೆ. ಮೆಕ್ಕಾಲಿನ್,
ಮೈಸೂರು ಗವರ್ನಮೆಂಟ್ ಅ|| ಸೆಕ್ರಟೇರಿ.